ಸದನದಲ್ಲಿ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು
ನೂರ ನಲವತ್ತಮೂರನೆಯ ಅಧಿವೇಶನ
ಶುಕ್ರವಾರ, ದಿನಾಂಕ : 05 ನೇ ಫೆಬ್ರುವರಿ, 2021

ಜವಳಿ ನಿಗಮಗಳ ಕಾರ್ಯ ನಿರ್ವಹಣೆ ಬಗ್ಗೆ

ಶ್ರೀಮತಿ ಭಾರತಿ ಶೆಟ್ಟಿ(ನಾಮನಿರ್ದೇಶನ ಹೊಂದಿದವರು) -

86 (526) ಕೈಮಗ್ಗ ಮತ್ತು ಜವಳಿ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ -

(ಅ) ಜವಳಿ ಇಲಾಖೆಯಡಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ನಿಗಮಗಳು ಎಷ್ಟು;

(ಆ) ಸದರಿ ನಿಗಮಗಳಿಗೆ ರಾಜ್ಯ ಹಾಗೂ ಕೇಂದ್ರ ಸರ್ಕಾರದಿಂದ ಯಾವ ರೀತಿಯಲ್ಲಿ ಅನುದಾನ ನೀಡಲಾಗುತ್ತಿದೆ; (ಅಂಕಿ ಅಂಶ ಒದಗಿಸುವುದು)

(ಇ) ಕೈಮಗ್ಗ ಹಾಗೂ ವಿದ್ಯುತ್ ಮಗ್ಗದಿಂದ ನೇಯ್ದ ಬಟ್ಟೆಗಳನ್ನು ಯಾವ ರೀತಿಯಲ್ಲಿ ವಿಲೇವಾರಿ ಮಾಡಲಾಗುತ್ತಿದೆ;

(ಈ) ಉತ್ಪಾದನೆ ಹಾಗೂ ಬೇಡಿಕೆಗಳ ಅಂತರ ಯಾವ ರೀತಿಯಲ್ಲಿದೆ;

(ಉ) ಇದರ ಪರಿಣಾಮವಾಗಿ ರಾಜ್ಯದ ನೇಕಾರರ ಸಮಸ್ಯೆಗೆ ಸರ್ಕಾರ ಯಾವ ರೀತಿಯಲ್ಲಿ ಪರಿಹಾರ ಒದಗಿಸುತ್ತದೆ;

(ಊ) ಸದರಿ ನಿಗಮಗಳು ನೇಕಾರರಿಂದ ಪಡೆದ ಬಟ್ಟೆಗಳನ್ನು ಮಾರಾಟ ಮಾಡಲು ಶಿಕ್ಷಣ ಇಲಾಖೆ, ಆರೋಗ್ಯ ಇಲಾಖೆ, ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ ಹಾಗೂ ಇತರೆ ಇಲಾಖೆಗಳಿಂದ ನೇರವಾಗಿ ಸಹಕಾರ ಪಡೆಯಲು ಸರ್ಕಾರ ಯಾವ ಕ್ರಮಗಳನ್ನು ಹಮ್ಮಿಕೊಂಡಿದೆ?